ನಿಶಾ (2)

<u>**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಟಿ.ಶ್ರೀಕಂಠೇಗೌಡ ಇವರು ನಿಯಮ-330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ.**</u>

**ವಿಷಯ:**

ರಾಜ್ಯದಲ್ಲಿನ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಬೇರೆ ಬೇರೆ ಕಾರಣಗಳಿಂದ ತೆರವಾದ ಹುದ್ದೆಗಳನ್ನು ತುಂಬಲು ಆರ್ಥಿಕ ಮಿತವ್ಯಯದ ಕಾರಣ ನೀಡಿ ಆರ್ಥಿಕ ಇಲಾಖೆಯು ಯಾವುದೇ ಅನುದಾನಿತ ಹುದ್ದೆಗಳ ಭರ್ತಿ ಮಾಡುವ ಪ್ರಸ್ತಾವನೆಗಳನ್ನು ಸಲ್ಲಿಸಬಾರದು ಎಂದು ಆದೇಶವನ್ನು ನೀಡಿದ್ದು ಇದರಿಂದ ಮಕ್ಕಳ ಪರೀಕ್ಷೆಯ ಫಲಿತಾಂಶ ಕುಂಠಿತವಾಗುತ್ತದೆ. ಆದ್ದರಿಂದ ಈ ಕೂಡಲೇ ಸದರಿ ಆದೇಶವನ್ನು ಹಿಂಪಡೆದು ಖಾಲಿಹುದ್ದೆಗಳ ಭರ್ತಿಗೆ ಸರ್ಕಾರ ಅನುಮತಿ ನೀಡಬೇಕೆಂಬ ವಿಷಯದ ಬಗ್ಗೆ ಪ್ರಸ್ತಾಪಿಸಲಾಗಿದೆ.

**ಉತ್ತರ:**

ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್‌ಇಜಿ 2017, ದಿನಾಂಕ:25/09/2018ರಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015ರವರೆಗೆ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಬೋಧಕ (ಸಹ ಶಿಕ್ಷಕ ವೃಂದ) ಹಾಗೂ ದೈಹಿಕ ಶಿಕ್ಷಣ ಶಿಕ್ಷಕ (ಗ್ರೇಡ್-1) ಹುದ್ದೆಗಳನ್ನು ಆರ್ಥಿಕ ಮಿತವ್ಯಯ ಸಡಿಲಿಕೆ ಮಾಡಿ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇದರೊಂದಿಗೆ ವಿವಿಧ ಕಾರಣಗಳಿಂದ ಮುಚ್ಚಲ್ಪಟ್ಟ ಅನುದಾನಿತ ಪ್ರೌಢಶಾಲೆಗಳಲ್ಲಿ ಹೆಚ್ಚುವರಿಯಾಗುವ ಹಾಗೂ ಕಾರ್ಯಭಾರವಿಲ್ಲದ ಸಹ ಶಿಕ್ಷಕ ಹಾಗೂ ದೈಹಿಕ ಶಿಕ್ಷಕರನ್ನು ಗುರುತಿಸಿ ಅಗತ್ಯವಿರುವ ಹಾಗೂ ಕಾರ್ಯಭಾರವಿರುವ ಅನುದಾನಿತ ಪ್ರೌಢಶಾಲೆಗಳಿಗೆ ಹಂಚಿಕೆ ಮಾಡಲಾಗುತ್ತಿತ್ತು.

ಪ್ರಸ್ತುತ ಸಾಲಿನಲ್ಲಿ ಕೋವಿಡ್-೧೯ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆಇ ೧೫೭ ವೆಚ್ಚ-೮/೨೦೨೦ ದಿನಾಂಕ:೧೦.೦೬.೨೦೨೦ರಲ್ಲಿ ಅನುದಾನಿತ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜಿನಾಮೆ, ಇತರೆ ಯಾವುದೇ ಕಾರಣಗಳಿಂದ ಉಂಟಾಗುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಂತಿಲ್ಲ ಎಂದು ಆದೇಶಿಸಲಾಗಿದೆ.

ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ವಿವಿಧ ಕಾರಣಗಳಿಂದ ದಿನಾಂಕ:೩೧/೧೨/೨೦೧೫ರ ಪೂರ್ವದಲ್ಲಿ ಖಾಲಿಯಾದ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಅವಕಾಶ ಕಲ್ಪಿಸಿರುವುದಕ್ಕೆ ಅನುಕೂಲವಾಗುವಂತೆ ಬಾಕಿ ಉಳಿದ ಪ್ರಸ್ತಾವನೆಗಳಿಗೆ ಆರ್ಥಿಕ ಮಿತವ್ಯಯ ಸಡಿಲಿಕೆ ನೀಡುವ ಬಗ್ಗೆ ಪ್ರಸ್ತಾಪಿಸಿ, ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿದ್ದು, ದಿನಾಂಕ:15/10/2020ರಂದು ನೀಡಿರುವ ಅಭಿಪ್ರಾಯ ಈ ಕೆಳಕಂಡಂತಿದೆ.

"The administrative department proposal has been examined. As the fiscal position of the state is in such state that creating more commitment on revenue expenditure is not viable, the ban on appointments under grant-in -aid for the primary and secondary education department is necessary in the interest of the fiscal discipline. Hence, the administrative department proposal for relaxation for appointments cannot be considered."

ಪ್ರಸ್ತುತ ಸಾಲಿನಲ್ಲಿ ಶಾಲಾ ಕಾಲೇಜುಗಳು ಕೋವಿಡ್-19 ರಿಂದಾಗಿ ಪ್ರಾರಂಭವಾಗಿಲ್ಲದಿರುವುದರಿಂದ ಮಕ್ಕಳ ಪರೀಕ್ಷೆ ಫಲಿತಾಂಶದ ಮೇಲೆ ಯಾವುದೇ ಪರಿಣಾಮ ಉದ್ಭವಿಸುವುದಿಲ್ಲ. ಅಲ್ಲದೆ, ಅತಿಥಿ ಶಿಕ್ಷಕರನ್ನು ಅಗತ್ಯ ಸಂಖ್ಯೆಯಲ್ಲಿ ನೇಮಿಸಿಕೊಳ್ಳುವುದರಿಂದ ಸಹ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳಲಾಗುತ್ತಿದೆ.

ಸಂ: ಇಪಿ೩೭೬ಎಸ್‌ಇಎಸ್ ೨೦೨೦

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು